5) ಮೇಲೆ ಮಂಡಿಸಿರುವ ಎಲ್ಲಾ ಅಂಶಗಳು ಮತ್ತು ಹಿಂದಿನ ಸಾಲಿನಲ್ಲಿ ವಸೂಲಿಯಾಗಿರುವ ರಾಜಸ್ವವನ್ನು ದೃಷ್ಟಿಯಲ್ಲಿಟ್ಟುಕೊಂಡು ವಾರ್ಷಿಕ ಗುರಿಯನ್ನು ನಿಗದಿಪಡಿಸಲಾಗುತ್ತದೆ.

ಆರಾಧನಾ ಯೋಜನೆ ಕುರಿತು

525 (828) ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು):ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ನೇ ಸಾಲಿಗೆ ಆರಾಧನಾ ಯೋಜನೆಗೆ ನಿಗಧಿಪಡಿಸಿದ ಹಣ ಎಷ್ಟು

ಆ) 31-1-1997ರ ವರೆಗೆ ಜಿಲ್ಲಾವಾರು ಬಿಡುಗಡೆ ಮಾಡಿದ ಹಣ ಎಷ್ಟು;

ಶ್ರೀ ಬಿ. ಮುನಿಯಪ್ಪ ಮುದ್ದಪ್ಪ (ಮುಜರಾಯಿ ಸಚಿವರು):

ಅ) 1996-97ನೇ ಸಾಲಿನ ಆಯವ್ಯಯದಲ್ಲಿ ಆರಾಧನಾ ಯೋಜನೆಗೆ ರೂ. 5.00 ಕೋಟಿಯನ್ನು ಒದಗಿಸಲಾಗಿದೆ.

ಆ) ಇನ್ನೂ ಬಿಡುಗಡೆ ಮಾಡಬೇಕಾಗಿದೆ.

ದೇವಸ್ಥಾನಗಳಿಗೆ ಹಣ ಬಿಡುಗಡೆ

526 (829) ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು): ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ನೇ ಸಾಲಿನಲ್ಲಿ ದೇವಸ್ಥಾನಗಳನ್ನು ಕಟ್ಟಲು ಹಾಗೂ ಜೀರ್ಣೋದ್ಧಾರಕ್ಕೆ ಸಹಾಯ ಮಾಡಲು ನಿಗಧಿ ಮಾಡಿದ ಹಣ ಎಷ್ಟು?

ಆ) 31-1-1997 ರವರೆಗೆ ಜಿಲ್ಲಾವಾರು ಬಿಡುಗಡೆ ಮಾಡಿದ ಹಣವೆಷ್ಟು;

ಶ್ರೀ ಬಿ. ಮುನಿಯಪ್ಪ ಮುದ್ದಪ್ಪ (ಮುಜರಾಯಿ ಸಚಿವರು):

ಅ) 1996-97ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿದ ಹಣ

ದುರಸ್ಥಿ: ಜೀರ್ಣೋದ್ಧಾರ	ನಿರ್ಮಾಣ
ರೂ. 1.26 ಕೋಟಿ	ರೂ. 1.05 ಕೋಟಿ

ಆ) ಇನ್ನೂ ಬಿಡುಗಡೆ ಮಾಡಬೇಕಾಗಿದೆ.